ಬಿ.ಪಿ.ಎಲ್. ಕಾರ್ಡುಗಳು

519(283); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) ನೆಲಮಂಗಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಬಿಪಿಎಲ್ ಕಾರ್ಡುಗಳ ಸಂಖ್ಯೆ ಎಷ್ಟು;

ಆ) ಪ್ರತಿ ತಿಂಗಳು ಈ ಬಿಪಿಎಲ್ ಕಾರ್ಡುದಾರರಿಗೆ ಅನ್ನಭಾಗ್ಯ ಯೋಜನೆಯಡಿ ಅಕ್ಕಿ ವಿತರಣೆ ಮಾಡಲಾಗುತ್ತಿದೆಯೇ; ವಿತರಣೆ ಮಾಡುತ್ತಿರುವ ಅಕ್ಕಿಯ ಪ್ರಮಾಣವೆಷ್ಟು (ವಿವರ ಒದಗಿಸುವುದು)

ಇ) ತಿಂಗಳೊಂದಕ್ಕೆ ಅನ್ನಭಾಗ್ಯ ಯೋಜನೆಯ ಅಕ್ಕಿಯ ಬಿಪಿಎಲ್ ಕಾರ್ಡುದಾರರಿಗೆ ವಿತರಣೆ ಆಗುವ ಅಕ್ಕಿ ಪ್ರಮಾಣವೆಷ್ಟು; ಒಂದು ತಿಂಗಳಿಗೆ ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಅಕ್ಕಿ ವಿತರಣೆ ಮಾಡುತ್ತಿರುವ ಪ್ರಮಾಣ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ದಿನೇಶ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ರಾಜ್ಯ ಸಚಿವರು)

ಅ) ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ಮತ್ತು ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿನ ಸೋಲೂರು ಹೋಬಳಿಗೆ ಸೇರಿದ್ದು, ಒಟ್ಟಾರೆ 48701 ಬಿಪಿಎಲ್ ಪಡಿತರ ಚೀಟಿಗಳು ಇರುತ್ತವೆ.

ಆ) ಪ್ರತಿ ತಿಂಗಳು ನಿಯಮಿತವಾಗಿ ಬಿಪಿಎಲ್ ಪಡಿತರ ಚೀಟಿದಾರರಿಗೆ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಅದರಂತೆ ಪ್ರತಿ ಮಾಹೆಗೆ 48701 ಬಿಪಿಎಲ್ ಪಡಿತರ ಚೀಟಿಗಳಿಗೆ ವಿತರಿಸಲು ಬೇಕಾದ ಅಕ್ಕಿಯ ಪ್ರಮಾಣ 7159.92 ಕ್ವಿಂಟಲ್‌ಗಳು ಆಗಿರುತ್ತದೆ.

ಇ) ರಾಜ್ಯದ ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಕಾರ್ಡುದಾರರಿಗೆ ಪ್ರತಿ ಮಾಹೆ ವಿತರಿಸಲಾಗುತ್ತಿರುವ ಅಕ್ಕಿಯ ಪ್ರಮಾಣ 1,67,352 ಮೆ.ಟನ್.

ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಪ್ರತಿ ಮಾಹೆಗೆ 48701 ಬಿಪಿಎಲ್ ಪಡಿತರ ಚೀಟಿಗಳಿಗೆ ವಿತರಿಸಲು ಬೇಕಾದ ಅಕ್ಕಿಯ ಪ್ರಮಾಣ 715.992 ಮೆ.ಟನ್. ಆಗಿರುತ್ತದೆ.

ಸರ್ವೀಸ್ ರಸ್ತೆ ಮುಖಾಂತರ ವಾಹನ ಸಂಚಾರ

520(1120); ಡಾ॥ ಕೆ. ಶ್ರೀನಿವಾಸಮೂರ್ತಿ

ಅ) ನೆಲಮಂಗಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ತುಮಕೂರು ಕಡೆಗೆ NH4 ಹಾಗೂ ಹಾಸನ ಕಡೆಗೆ NH48 ಎರಡೂ ರಸ್ತೆಗಳು ಹಾದು ಹೋಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲಿ, ನೆಲಮಂಗಲ–ದಾಬಸ್‌ಪೇಟೆ ಎರಡು ಕಡೆಗಳಲ್ಲಿ ಮೇಲುಸೇತುವೆ ನಿರ್ಮಾಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಎರಡು ಬಸ್ ನಿಲ್ದಾಣಗಳಲ್ಲಿ ಸರ್ವಿಸ್ ರಸ್ತೆ ಮುಖಾಂತರ ಕೆಲವು ವಾಹನಗಳು ಸಂಚರಿಸದಿರುವುದರಿಂದ ವಿದ್ಯಾರ್ಥಿಗಳು, ನೌಕರರುಗಳು ಹಾಗೂ ಸಾರ್ವಜನಿಕರುಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಇನ್ನು ಮುಂದೆ ಸರ್ವಿಸ್ ರಸ್ತೆ ಮುಖಾಂತರ ಸಂಚರಿಸುವಂತೆ ಸಂಬಂಧಪಟ್ಟವರಿಗೆ ಕಟ್ಟುನಿಟ್ಟಿನ ಆದೇಶ ನೀಡಲಾಗುತ್ತದೆಯೇ?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಬಂದಿರುತ್ತದೆ.